
# ಅವೈಜ್ಞಾನಿಕ ಕೆಪಿಎಸ್ ಶಾಲೆ ಕೈಬಿಡುವಂತೆ ಹೊರಟ್ಟಿ ಪತ್ರ

**ಹುಬ್ಬಳ್ಳಿ:** ಅವೈಜ್ಞಾನಿಕವಾಗಿ, ನಿಯಮಬಾಹಿರವಾಗಿ ಕೆಪಿಎಸ್ (ಕರ್ನಾಟಕ ಪಬ್ಲಿಕ್) ಶಾಲೆಗಳನ್ನಾಗಿ ಪರಿವರ್ತಿಸುವುದನ್ನು ಕೈಬಿಡಬೇಕು ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಆಗ್ರಹಿಸಿದ್ದಾರೆ.



ಈ ಸಂಬಂಧ ಸರಕಾರಕ್ಕೆ ಪತ್ರ ಬರೆದಿರುವ ಅವರು, ಹೊಸದಾಗಿ ಕೆಪಿಎಸ್ ಮ್ಯಾಗ್ನೆಟ್ ಶಾಲೆಗಳನ್ನು ತೆರೆಯುವುದಾಗಿ ಸರಕಾರ ನಿರ್ಧರಿಸಿದೆ. ಆದರೆ, ಸರಕಾರದ ನಿಯಮಗಳನ್ನು ಉಲ್ಲಂಘಿಸಿ ಕೆಪಿಎಸ್ ಶಾಲೆಗಳ ತೆರೆಯಲು ಮುಂದಾಗಿರುವುದು ಖಂಡನೀಯ. ಇದರಿಂದಾಗಿ ರಾಜ್ಯದಲ್ಲಿ ಸರಕಾರಿ, ಅನುದಾನಿತ ಶಾಲೆಗಳೆಲ್ಲ ಮುಚ್ಚುತ್ತವೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

ಕರ್ನಾಟಕ ಪಬ್ಲಿಕ್ ಸ್ಕೂಲ್‌ಗಳೆಂದರೆ 1 ರಿಂದ 12 ತರಗತಿವರೆಗೆ ಒಂದೇ ಕಡೆ ಕಿರಿಯ, ಹಿರಿಯ ಪ್ರಾಥಮಿಕ ಶಾಲೆ, ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜು ಇರಬೇಕು. ಇದರ ಆಡಳಿತದ ಜವಾಬ್ದಾರಿ ಪ್ರಾಚಾರ್ಯರೊಬ್ಬರದೇ ಇರಬೇಕು. ಇದು 2018ರಲ್ಲಿ ಸರಕಾರ ಹೊರಡಿಸಿರುವ ನಿಯಮ. ಆದರೆ ಇದೀಗ ಕೆಲವು ಕಡೆಗಳಲ್ಲಿ ಕಿರಿಯ ಪ್ರಾಥಮಿಕ ಶಾಲೆಗಳಿದ್ದರೆ, ಹಿರಿಯ ಪ್ರಾಥಮಿಕ ಶಾಲೆ ಮತ್ತೊಂದು ಕಡೆ, ಪ್ರೌಢಶಾಲೆ ಮತ್ತೊಂದು ಕಡೆ, ಪಿಯು ಕಾಲೇಜು ಮಗದೊಂದು ಕಡೆ. ಈ ರೀತಿ ಸಮೀಪದಲ್ಲಿರುವುಗಳನ್ನೆಲ್ಲ ಸೇರಿಸಿಕೊಂಡು ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪರಿವರ್ತಿಸಲಾಗುತ್ತಿದೆ. ಇದು ಸಮಂಜಸವಲ್ಲ. ಇದಕ್ಕೆ ಉದಾಹರಣೆಯೆಂದರೆ ಹಾವೇರಿ ಜಿಲ್ಲೆ ಬ್ಯಾಡಗಿ ತಾಲೂಕಿನ ಚಿಕ್ಕಬಾಸೂರ ಗ್ರಾಮದಲ್ಲಿನ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯನ್ನು ಪಿಎಂಶ್ರೀ ಕರ್ನಾಟಕ ಪಬ್ಲಿಕ್ ಸ್ಕೂಲ್ ಎಂದು ಉನ್ನತೀಕರಿಸಿ 8ನೇ ತರಗತಿ ಪ್ರಾರಂಭಿಸಲಾಗುತ್ತಿದೆ. ಕೆಪಿಎಸ್ ಶಾಲೆಗಳ ಉದ್ದೇಶಕ್ಕೆ ಹಾಗೂ ನಿಯಮಗಳಿಗೆ ಇದು ಸಮಂಜಸವೆನಿಸಲಾರದು ಎಂದು ತಿಳಿಸಿದ್ದಾರೆ.

ಇದೇ ರೀತಿ ರಾಣೆಬೆನ್ನೂರು ತಾಲೂಕಿನ ಉಕ್ಕುಂದ, ಅಸುಂಡಿ, ಕಜ್ಜರಿ ಗ್ರಾಮಗಳ ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಸ್ಕೂಲ್ ಎಂದು ಉನ್ನತೀಕರಿಸಿ 8ನೇ ತರಗತಿಯನ್ನು ಪ್ರಾರಂಭಿಸಲಾಗುತ್ತಿದೆ. ಇದನ್ನು ತಡೆ ಹಿಡಿಯಬೇಕು. ಮೂಲ ನಿಯಮಗಳನ್ನು ಗಾಳಿಗೆ ತೂರಿ, ಬೇರೆ ಬೇರೆ ಅಂತರದ ಶಾಲೆಗಳನ್ನು ಒಗ್ಗೂಡಿಸಿ ಕೆಪಿಎಸ್ ಶಾಲೆಗಳನ್ನಾಗಿ ಘೋಷಿಸಲು ಹೊರಟಿರುವುದು ದುರದೃಷ್ಟಕರ ಸಂಗತಿ. ಈ ಕೆಪಿಎಸ್ ವ್ಯಾಪ್ತಿಗೆ ಒಳಪಡುವ ಸುತ್ತಮುತ್ತಲಿನ ಪ್ರದೇಶಗಳಲ್ಲಿ ದಶಕಗಳಿಂದ ಬಡವರ ಮಕ್ಕಳಿಗೆ ಶಿಕ್ಷಣ ನೀಡುತ್ತಿರುವ ಅನುದಾನಿತ ಶಾಲೆಗಳಲ್ಲಿ ಮತ್ತು ಸರಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ವಿದ್ಯಾರ್ಥಿಗಳ ಕೊರತೆ ಎದುರಾಗುತ್ತಿದೆ. ಅನುದಾನಿತ ಶಾಲೆಗಳು ಸಂಪೂರ್ಣ ಮುಚ್ಚುವ ಭೀತಿ ಎದುರಿಸುವಂತಾಗಿದೆ. ಅಲ್ಲಿನ ಶಿಕ್ಷಕರು, ಸಿಬ್ಬಂದಿಯ ಭವಿಷ್ಯ ಆತಂಕಕ್ಕೆ ಸಿಲುಕಿದೆ. ತಕ್ಷಣವೇ ಸರಕಾರ ಮಧ್ಯ ಪ್ರವೇಶಿಸಿ, ಸರಕಾರಿ ಪ್ರಾಥಮಿಕ ಶಾಲೆಗಳನ್ನು ಉಳಿಸಿ ಬೆಳೆಸುವ ಬಗ್ಗೆ, ಶಿಕ್ಷಣ ಸಂಸ್ಥೆಗಳಲ್ಲಿರುವ ಶಿಕ್ಷಕರ ಭವಿಷ್ಯದ ಹಿತದೃಷ್ಟಿಯಿಂದ ಸರಕಾರಿ ಶಾಲೆಗಳನ್ನು ಉನ್ನತೀಕರಿಸುವ ಕಾರ್ಯವನ್ನು ಕೈಬಿಡಬೇಕು. ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಶಾಲೆಗಳಿಲ್ಲದ ಬೇರೆ ಸ್ಥಳಕ್ಕೆ ಸ್ಥಳಾಂತರಿಸಲು ಅಗತ್ಯ ಕ್ರಮಕೈಗೊಳ್ಳಬೇಕು ಎಂದು ಪತ್ರದಲ್ಲಿ ಆಗ್ರಹಿಸಿದ್ದಾರೆ.